# ಸಾಮರ್ಥ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮ




ಗದಗ ಮಾಚ 12: ಗದಗ ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಮಕ್ಕಳ ರಕ್ಷಣಾ ನಿರ್ದೇಶನಾಲಯ, ಬೆಂಗಳೂರು, ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಗದಗ ಇವರ ಸಹಯೋಗದಲ್ಲಿ ಸೋಮವಾರದಂದು ಜಿ.ಪಂ. ಸಭಾಂಗಣದಲ್ಲಿ ಬಾಲನ್ಯಾಯ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ, ದತ್ತು ಮಾರ್ಗಸೂಚಿಗಳ ಕುರಿತು ಸಾಮಥ್ರ್ಯಾಭಿವೃದ್ಧಿ ತರಬೇತಿಗೆ ಪೊಲೀಸ್ ಇಲಾಖೆ ತನಖಾ ಅಧಿಕಾರಿ/ಸಹಾಯಕರು ಹಾಗೂ ಪಂಚಾಯತಿ ಅಭಿವೃದ್ಧಿ ಅಧಿಕಾರಿಗಳಿಗೆ ಸಾಮಥ್ರ್ಯಾಭಿವೃದ್ಧಿ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಳ್ಳಲಾಯಿತು. ಮಕ್ಕಳ ಕಲ್ಯಾಣ ಸಮಿತಿ ಅಧ್ಯಕ್ಷರಾದ ಶ್ರೀಮತಿ ಅನ್ನಪೂರ್ಣ ಗಾಣಗೇರ ಕಾರ್ಯಕ್ರಮವನ್ನು ಉದ್ಘಾಟಿಸಿದರು.ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆಯ ಮಹಿಳಾ ಅಧಿಕಾರಿ ಶ್ರೀಮತಿ ಕಮಲವ್ವ ಬೆಳ್ಳೂರು, ಅವರು ಮಾತನಾಡಿ ಇಲಾಖೆ ಹಲವಾರು ತರಬೇತಿ ಕಾರ್ಯಾಗಾರವನ್ನು ಹಮ್ಮಿಕೊಂಡಿದ್ದು ಇದರ ಸದುಪಯೋಗಪಡೆಯಬೇಕೆಂದರು.

ಜೆ.ಸಿ. ರೇಶ್ಮಿ ಅವರು ಪೊಕ್ಸೋ ಕಾಯ್ದೆ, ಬಾಲ್ಯವಿವಾಹ ನಿಷೇದ ಕಾಯ್ದೆ ಕುರಿತು ಉಪನ್ಯಾಸ ನೀಡಿದರು ಹಾಗೂ ಸಿಸ್ಟರ್ ಡುಲ್ಸಿನ್, ಬಾಲನ್ಯಾಯ ಕಾಯ್ದೆ (ಮಕ್ಕಳ ಪಾಲನೆ ಮತ್ತು ರಕ್ಷಣೆ) ಕಾಯ್ದೆ–, ದತ್ತು ಮಾರ್ಗಸೂಚಿ ಕುರಿತು ಉಪನ್ಯಾಸ ನೀಡಿದರು.ಕಾರ್ಯಕ್ರಮದಲ್ಲಿ ಜಿಲ್ಲಾ ಮಕ್ಕಳ ರಕ್ಷಣಾಧಿಕಾರಿ ರಫೀಕಾ ಹಳ್ಳೂರು ಪ್ರಸ್ತಾವಿಕವಾಗಿ ಮಾತನಾಡಿದರು. ಕಾರ್ಯಕ್ರಮದಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಜಿಲ್ಲಾ ಪೊಲೀಸ್ ಇಲಾಖೆ, ಜಿಲ್ಲಾ ಮಕ್ಕಳ ರಕ್ಷಣಾ ಘಟಕ, ಹಾಗೂ ಸಿಬ್ಬಂದಿ ವರ್ಗದವರು ಹಾಜರಿದ್ದರು. ಮಲ್ಲಪ್ಪ ಹೊಸಳ್ಳಿ ಕಾರ್ಯಕ್ರಮ ನಿರೂಪಿಸಿದರು.

## ಬೆಳಗಾವಿಯ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ವಿದ್ಯಾರ್ಥಿಗಳ ಸಾಧನೆಗೆ ಪ್ರಾಂಶುಪಾಲರಿಂದ ಅಭಿನಂದನೆ

ಬೆಳಗಾವಿ,ಮಾ.12 : ಪಾಂಡಿಚೆರಿಯ ಮನುಕುಲ ವಿನಯಾಗರ ತಾಂತ್ರಿಕ ಮಹಾವಿದ್ಯಾಲಯದಲ್ಲಿ ಫೆ.28 ರಂದು ರಾಷ್ಟ್ರೀಯ ವಿಜ್ಞಾನ ದಿನದ ಅಂಗವಾಗಿ ಪ್ರಾಜೆಕ್ಟ್ ಸ್ಪರ್ಧೆ ಏರ್ಪಡಿಸಲಾಗಿತ್ತು. ಬೆಳಗಾವಿ ನಗರದ ಸರ್ಕಾರಿ ಪಾಲಿಟೆಕ್ನಿಕ್ ಸಂಸ್ಥೆಯ ಪ್ರಸಕ್ತ ಸಾಲಿನ ಯಾತ್ರಿಂಕ ವಿಭಾಗದ ಅಂತಿಮ ವರ್ಷದ ವಿದ್ಯಾರ್ಥಿಗಳಾದ ರೋಹನ ಗಸ್ತಿ, ಕಾರ್ತಿಕ ತಾರಿಹಾಳ, ಸಿದ್ಧಾರ್ಥ ಕಾಮ್ಕರ ಇವರು **Automatic filling and capping M/C** ವಸ್ತು ಪ್ರದರ್ಶನ ಸ್ಪರ್ಧೆಯಲ್ಲಿ ಸಮಾಧಾನಕರ ಬಹುಮಾನ ಪಡೆದಿರುತ್ತಾರೆ.ವಿದ್ಯಾರ್ಥಿಗಳ ಈ ಸಾಧನೆಗೆ ಸಂಸ್ಥೆಯ ಪ್ರಾಂಶುಪಾಲರಾದ ವಾಸುದೇವ ಅಪ್ಪಾಜಿಗೋಳ ಹಾಗೂ ಯಾಂತ್ರಿಕ ವಿಭಾಗದ ಮುಖ್ಯಸ್ಥರಾದ ಗಂಗಾಧರ ಹುನಗುಂದ ಅವರು ವಿದ್ಯಾರ್ಥಿಗಳಿಗೆ ಹಾಗೂ ಮಾರ್ಗದರ್ಶಕರಾದ ಲಿಂಗರಾಜ ಶಾಮನೂರ ಹಾಗೂ ಶಿವಲಿಂಗ ಮೂಕನವರ ಅವರನ್ನು ಅಭಿನಂದಿಸಿದರು.

## ಇಂದು ಸುವರ್ಣ ಸಂಭ್ರಮ ಜ್ಯೋತಿ ರಥಯಾತ್ರೆ ಆಗಮನ

ಮೂಡಲಗಿ: ಕರ್ನಾಟಕ ಸುವರ್ಣ ಸಂಭ್ರಮ ಅಂಗವಾಗಿ ಜ್ಯೋತಿ ರಥಯಾತ್ರೆಯು ಬುಧವಾರ ಮಾ.13 ರಂದು ಮೂಡಲಗಿ ತಾಲೂಕಿಗೆ ಆಗಮಿಸಲಿದ್ದೆ

ಮುಂಜಾನೆ 9 ಘಂಟೆಗೆ ಸಂಗನಕೇರಿಗೆ ಆಗಮಿಸಲಿದ್ದು, ನಂತರ ಮೂಡಲಗಿ ತಾಲೂಕಿನ ಕಲ್ಲೋಳಿ, ನಾಗನೂರ ಮಾರ್ಗವಾಗಿ ಮಧ್ಯಾಹ್ನ 1 ಗಂಟೆಗೆ ಮೂಡಲಗಿ ನಗರಕ್ಕೆ ಆಗಮಿಸಿ ನಂತರ ಧರ್ಮಟ್ಟಿ, ಮುಸಗುಪ್ಪಿ, ತಿಗಡಿ ಹಾಗೂ ಕುಲಗೋಡ ಮಾರ್ಗವಾಗಿ ಯಾದವಾಡ ಗ್ರಾಮಕ್ಕೆ ಸಾಯಂಕಾಲ ತಲುಪಲಿದ್ದು, ಈ ಕಾರ್ಯಕ್ರಮದಲ್ಲಿ ತಾಲ್ಲೂಕಿನ ಚುನಾಯಿತ ಪ್ರತಿನಿಧಿಗಳು, ಗಣ್ಯರು, ಅಧಿಕಾರಿಗಳು, ಕನ್ನಡ ಸಾಹಿತ್ಯ ಪರಿಷತ್ತಿನ ಸದಸ್ಯರುಗಳು, ಕನ್ನಡಪರ ಸಂಘಟನೆಗಳ ಅಧ್ಯಕ್ಷರುಗಳು, ಪದಾಧಿಕಾರಿಗಳು, ಕನ್ನಡ ಮನಸ್ಸುಗಳು ಹಾಗೂ ಎಲ್ಲಾ ಕನ್ನಡಾಭಿಮಾನಿಗಳು ಪಾಲ್ಗೊಂಡು ರಥಯಾತ್ರೆಯನ್ನು ಯಶಸ್ವಿಗೊಳಿಸಬೇಕೆಂದು ಕಸಾಪ ಮೂಡಲಗಿ ತಾಲೂಕ ಘಟಕದ ಅಧ್ಯಕ್ಷ ಡಾ.ಸಂಜಯ ಶಿಂದಿಹಟ್ಟಿ ಪ್ರಕಟನೆಯಲ್ಲಿ ತಿಳಿಸದ್ದಾರೆ

# ದರಪಟ್ಟಿ ಆಹ್ವಾನ

ಬೆಳಗಾವಿ,ಮಾ.12 : ಮಹಾನಗರ ಪಾಲಿಕೆ ವ್ಯಾಪ್ತಿಯಲ್ಲಿ ಪಿ.ಎಂ.ಸ್ವ–ನಿಧಿ ಯೋಜನೆಯ ಸ್ವ–ನಿಧಿ ಸೇ ಸಮೃದ್ಧಿ ಅಡಿ ಸಾಮಾಜಿಕ–ಆರ್ಥಿಕ ಸಮೀಕ್ಷೆ ಕೈಗೊಳ್ಳಲು 40 ಜನದತ್ತಾಂಶ ಸಂಗ್ರಹ ಮಾಡುವವರನ್ನು ಎರವಲು ಸೇವೆ ಮೂಲಕ ಒದಗಿಸಲು ನೋಂದಾಯಿತ ಸರ್ಕಾರೇತರ ಸಂಸ್ಥೆಗಳಿಂದ ದರಪಟ್ಟಿಯನ್ನು ಆಹ್ವಾನಸಲಾಗಿದೆ. ಆಸಕ್ತಿಯುಳ್ಳ ಸ್ಥಳೀಕರು ತಮ್ಮ ದರಪಟ್ಟಿಗಳನ್ನು ಮಾ. 18 ಸಂಜೆ 4.00 ಗಂಟೆಯ ಒಳಗೆ ಸಲ್ಲಿಸಬಹುದಾಗಿದೆ. ನಂತರ ಬಂದಂತಹ ದರಪಟ್ಟಿಗಳನ್ನು ಸ್ವೀಕರಿಸಲಾಗುವುದಿಲ್ಲ. ಹೆಚ್ಚಿನ ಮಾಹಿತಿಗಾಗಿ ಡೇ–ನಲ್ಮ್ ಯೋಜನೆಯ ಪಿಎಂ.ಸ್ವನಿದಿ ಶಾಖೆಯಲ್ಲಿ ಕಚೇರಿಗೆ ಸಂಪರ್ಕಿಸಬಹುದು ಎಂದು ಮಹಾನಗರ ಪಾಲಿಕೆ ಆಯುಕ್ತರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಸಚಿವ ಡಾ.ಎಚ್.ಕೆ.ಪಾಟೀಲ ಅವರಿಂದ ಕುಡಿಯುವ ನೀರು ಸರಬರಾಜು ಕಾಮಗಾರಿಗೆ ಶಂಕುಸ್ಥಾಪನೆ

ಗದಗ ಮಾರ್ಚ 12: ಜಿಲ್ಲಾ ಪಂಚಾಯತ, ಗ್ರಾಮೀಣಾಭಿವೃದ್ಧಿ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯಿಂದ ಕರ್ನಾಟಕ ರಾಜ್ಯ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ ರಾಜ್ ವಿಶ್ವವಿದ್ಯಾಲಯದ ಕುಡಿಯುವ ನೀರು ಸರಬರಾಜು ಮಾಡುವ ಕಾಮಗಾರಿಗೆ ರಾಜ್ಯದ ಕಾನೂನು, ನ್ಯಾಯ ಮತ್ತು ಮಾನವ ಹಕ್ಕುಗಳು, ಸಂಸದೀಯ ವ್ಯವಹಾರಗಳು, ಶಾಸನ ರಚನೆ ಮತ್ತು ಪ್ರವಾಸೋದ್ಯಮ ಇಲಾಖೆ ಹಾಗೂ ಗದಗ ಜಿಲ್ಲಾ ಉಸ್ತುವಾರಿ ಸಚಿವರಾದ ಡಾ.ಎಚ್.ಕೆ.ಪಾಟೀಲ ಶಂಕುಸ್ಥಾಪನೆಯನ್ನು ನೆರವೇರಿಸಿದರು.ಈ ಸಂದರ್ಭದಲ್ಲಿ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ, ಮಾಜಿ ಶಾಸಕ ಡಿ.ಆರ್. ಪಾಟೀಲ, ವಿಶ್ವವಿದ್ಯಾಲಯದ ಕುಲಪತಿಗಳಾದ ವಿಷ್ಣುಕಾಂತ ಚಟಪಲ್ಲಿ, ವಿತ್ತಾಧಿಕಾರಿ ಪ್ರಶಾಂತ ಜೆ.ಸಿ, ಕುಲಸಚಿವರಾದ ಡಾ. ಸುರೇಶ ನಾಡಗೌಡರ ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಉಪವಿಭಾಗಾಧಿಕಾರಿ ಡಾ.ವೆಂಕಟೇಶ ನಾಯ್ಕ ಸೇರಿದಂತೆ ಇತರರು ಉಪಸ್ಥಿತರಿದ್ದರು.

# ಮುಸ್ಲಿಂಮೇತರ ಧರ್ಮಗಳ ನಿರಾಶ್ರಿತರಿಗೆ ಪೌರತ್ವ :ಈರಣ್ಣ ಕಡಾಡಿ



ಬೆಳಗಾವಿ: ಪ್ರಧಾನಿ ನರೇಂದ್ರ ಮೋದಿ ನೇತೃತ್ವದ ಕೇಂದ್ರ ಸರ್ಕಾರವು 2019ರ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯಂತೆ ಇದೀಗ ಪೌರತ್ವ ತಿದ್ದುಪಡಿ ಕಾಯ್ದೆ(ಸಿಎಎ) ಜಾರಿಗೆ ಅಧಿಸೂಚನೆ ಪ್ರಕಟನೆ ಮಾಡುವ ಮೂಲಕ ಈ ಕಾಯ್ದೆಯನ್ನು ಜಾರಿಗೊಳಿಸಿದೆ. ಈ ಕಾಯ್ದೆಯಡಿ ಮುಸ್ಲಿಂಮೇತರ ಧರ್ಮಗಳ ನಿರಾಶ್ರಿತರಿಗೆ ಪೌರತ್ವ ನೀಡಲಾಗುತ್ತದೆ ಎಂದು ರಾಜ್ಯಸಭಾ ಸಂಸದ ಈರಣ್ಣ ಕಡಾಡಿ ಅವರು ಕೇಂದ್ರ ಸರ್ಕಾರದ ಕ್ರಮವನ್ನು ಸ್ವಾಗತಿಸಿದ್ದಾರೆ.

ಪೌರತ್ವ (ತಿದ್ದುಪಡಿ) ಕಾಯಿದೆ 2019 ಎಂಬುದು, ಭಾರತದ ಮೂರು ನೆರೆಯ ರಾಷ್ಟ್ರಗಳಾದ ಅಫ್ಘಾನಿಸ್ತಾನ, ಪಾಕಿಸ್ತಾನ ಮತ್ತು ಬಾಂಗ್ಲಾದೇಶದಿಂದ ಧಾರ್ಮಿಕ ಆಧಾರದ ಮೇಲೆ ಕಿರುಕುಳಕ್ಕೊಳಗಾದ ನಂತರ ಭಾರತಕ್ಕೆ ಬಂದ ನಿರಾಶ್ರಿತರಿಗೆ ಮತ್ತು 31 ಡಿಸೆಂಬರ್ 2014 ಕ್ಕಿಂತ ಮೊದಲು ಭಾರತದಲ್ಲಿ ಆಶ್ರಯ ಪಡೆದ ನಿರಾಶ್ರಿತರಿಗೆ ಭಾರತೀಯ ಪೌರತ್ವದ ಹಕ್ಕನ್ನು ನೀಡುವ ಕಾನೂನಾಗಿದೆ ಎಂದರು.

2016ರ ಸಂಸತ್ತಿನಲ್ಲಿ ಮಂಡನೆಯಾದ ಈ ಕಾಯ್ದೆಯು 10 ಡಿಸೆಂಬರ 2019ರಲ್ಲಿ ಲೋಕಸಭೆ ಮತ್ತು ರಾಜ್ಯಸಭೆಯಲ್ಲಿ ಕಾಯ್ದೆಯನ್ನು ಪಾಸ್ ಮಾಡಲಾಗಿತ್ತು. 12 ಡಿಸೆಂಬರ 2019ರಲ್ಲಿ ಪೌರತ್ವ ತಿದ್ದುಪಡಿ ಮಸೂದೆಗೆ ರಾಷ್ಟ್ರಪತಿಗಳು ಸಹಿ ಹಾಕಿದ ನಂತರ ದೇಶದಲ್ಲಿ ಭಾರೀ ಪ್ರತಿಭಟನೆ ನಡೆದ ಕಾರಣ ಇಲ್ಲಿಯವರೆಗೆ ಸಿಎಎ ಜಾರಿಯಾಗಿರಲಿಲ್ಲ. ಈ ಹಿಂದಿನ ಚುನಾವಣೆಯ ಸಂದರ್ಭದಲ್ಲಿ ಸಿಎಎ ಜಾರಿಗೊಳಿಸುತ್ತೇವೆ ಎಂದು ಪಕ್ಷವು ಪ್ರಣಾಳಿಕೆಯಲ್ಲಿ ಪ್ರಕಟಿಸಿತ್ತು. ಈಗ ಲೋಕಸಭಾ ಚುನಾವಣೆಗೂ ಮುನ್ನ ಸಿಎಎ ಜಾರಿಗೊಳಿಸುವ ಮೂಲಕ ಬಿಜೆಪಿ ತನ್ನ ಪ್ರಣಾಳಿಕೆಯಲ್ಲಿ ನೀಡಿದ ಭರವಸೆಯನ್ನು ಇಡೇರಿಸಿದೆ. ಈ ಐತಿಹಾಸಿಕ ನಿರ್ಧಾರ ಕೈಗೊಂಡ ಪ್ರಧಾನಿ ನರೇಂದ್ರ ಮೋದಿ ಅವರಿಗೆ ಹಾಗೂ ಕೇಂದ್ರ ಗೃಹ ಸಚಿವ ಅಮಿತ್ ಶಾ ಅವರಿಗೆ ದೇಶದ ಜನತೆಯ ಪರವಾಗಿ ಅಭಿನಂಧನೆಗಳನ್ನು ತಿಳಿಸಿದ್ದಾರೆ.

# ಧಾರ್ಮಿಕ ಸಂಸ್ಕಾರವನ್ನು ಪಡೆಯುವುದು ಪ್ರತಿಯೊಬ್ಬರ ಪ್ರಗತಿಗೆ ಮತ್ತು ಶಾಂತಿಗೆ ಕಾರಣವಾಗುತ್ತದೆ: ಸಿದ್ಧಲಿಂಗ ಶಿವಾಚಾರ್ಯ ಸ್ವಾಮಿಗಳು



ಸಂಡೂರು:ಮಾ: 12 : ಧಾರ್ಮಿಕ ಸಂಸ್ಕಾರವನ್ನು ಪಡೆಯುವುದು ಪ್ರತಿಯೊಬ್ಬರ ಪ್ರಗತಿಗೆ ಮತ್ತು ಶಾಂತಿಗೆ ಕಾರಣವಾಗುತ್ತದೆ ಅಂತಹ ಮಹತ್ತರ ಕಾರ್ಯವನ್ನು ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯವರು ಹಮ್ಮಿಕೊಂಡಿರುವುದು ಉತ್ತಮಕಾರ್ಯವಾಗಿದೆ ಎಂದು ವಣ್ಣಿಗಿ ಮಠದ ಸಿದ್ದಲಿಂಗ ಶಿವಾಚಾರ್ಯ ಸ್ವಾಮಿಗಳು ತಿಳಿಸಿದರು. ಅವರು ಸಂಡೂರು ತಾಲೂಕು ದರೋಜಿ ಗ್ರಾಮದಲ್ಲಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆಯವತಿಯಿಂದ ದರೋಜಿ ವಲಯದಲ್ಲಿ ಸಾಮೂಹಿಕ ಶ್ರೀ ಸತ್ಯನಾರಾಯಣ ಪೂಜಾ ಕಾರ್ಯಕ್ರಮ ಮತ್ತು ಧಾರ್ಮಿಕ ಸಭೆಯನ್ನು ಉದ್ದೇಶಿಸಿ ಮಾತನಾಡಿ ಇಂದು ನಮ್ಮ ಮಕ್ಕಳು ಮೊಬೈಲ್ ಹಿಂದೆ ಬಿದ್ದಿದ್ದಾರೆ, ಅಲ್ಲದೆ ಅಧುನಿಕ ಸಂಸ್ಕೃತಿಗೆ ಮಾರು ಹೋಗುತ್ತಿದ್ದಾರೆ, ಮಹಿಳೆಯರು ಧಾರವಾಹಿಗಳ ದಾಸರಾಗುತ್ತಿದ್ದಾರೆ, ಶ್ರೀಕ್ಷೇತ್ರ ಧರ್ಮಸ್ಥಳ ಸಂಸ್ಥೆಯವರು ಇಂತಹ ಧಾರ್ಮಿಕ ಕಾರ್ಯಕ್ರಮವನ್ನು ಹಮ್ಮಿಕೊಳ್ಳುವ ಮೂಲಕ ಮಹಿಳೆಯರಲ್ಲಿ ಧಾರ್ಮಿಕ ಜಾಗೃತಿ ಉಂಟಾಗುವುದರ ಜೊತೆಗೆ ನಮ್ಮ ಸಂಸ್ಕೃತಿಯನ್ನು ಉಳಿಸಿದಂತಹ ಮಹತ್ತರ ಕಾರ್ಯವಾಗುತ್ತದೆ, ಅಲ್ಲದೆ ಯುವಕರು ಇಂತಹ ಕಾರ್ಯಗಳಲ್ಲಿ ಭಾಗವಹಿಸಿದಲ್ಲಿ ಅವರು ಕೆಟ್ಟ ಹವ್ಯಾಸಗಳಿಂದ ದೂರ ಉಳಿಯಲು ಸಾಧ್ಯವಾಗುತ್ತದೆ, ಡಾ. ವೀರೇಂದ್ರ ಹೆಗ್ಗಡೆಯವರು ಕೈಗೊಂಡಿರುವ ಸಾಮಾಜಿಕ ಕಾರ್ಯಕ್ರಮಗಳು ಬಹು ಪ್ರಮುಖವಾಗಿದ್ದು ಸಾರ್ವಜನಕರು ಪೂರ್ಣಪ್ರಮಾಣದಲ್ಲಿ ಸದುಪಯೋಗ ಪಡಿಸಿಕೊಳ್ಳುವ ಮೂಲಕ ಉತ್ತಮ ಸಮಾಜ ನಿರ್ಮಾಣಕ್ಕೆ ನಾಂದಿಯಾಗಲಿ ಎಂದರು. ಮುಖ್ಯ ಅತಿಥಿಗಳಾಗಿ ಶ್ರೀ ಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಯೋಜನೆ, ಜಿಲ್ಲಾ ನಿರ್ದೇಶಕರಾದ ರೋಹಿತಾಕ್ಷರವರು ಮಾತನಾಡಿ ಡಾ.ವೀರೇಂದ್ರ ಹೆಗ್ಗಡೆಯವರು ಹಾಗೂ ಹೇಮಾವತಿ ಅಮ್ಮನವರ ಕೃಪಾಶ್ರೀವಾದದಿಂದ ಇಂದು ಇಡೀ ಸಮಾಜದಲ್ಲಿ ಧಾರ್ಮಿಕ ಕಾರ್ಯಕ್ರಮಗಳ ಜೊತೆಗೆ ಸ್ವಚ್ಛತೆಯ ಅಭಿಯಾನ, ಸ್ಮಶಾನ ಅಭಿವೃದ್ಧಿ ದೇವಸ್ಥಾನಗಳ ಜೀರ್ಣೋದ್ಧಾರಕ್ಕೆ ಅನುದಾನ ನೀಡುವ ಮೂಲಕ ಸಮಾಜದಲ್ಲಿ ಉತ್ತಮ ಸಂಸ್ಕಾರ ಉಂಟುಮಾಡುವಂತಹ ಕಾರ್ಯವನ್ನು ಮಾಡುತ್ತಿದ್ದು ಸಮಾಜದ ಬಂಧುಗಳು ಅದನ್ನು ಪೂರ್ಣಪ್ರಮಾಣದಲ್ಲಿ ಸದುಪಯೋಗ ಪಡಿಸಿಕೊಳ್ಳುವ ಮೂಲಕ ಉತ್ತಮ ಕಾರ್ಯದಲ್ಲಿ ಪ್ರತಿಯೊಬ್ಬರೂ ಭಾಗಿಯಾಗಬೇಕು ಎಂದು ಸಂಸ್ಥೆ ಕೈಗೊಂಡ ಕಾರ್ಯಕ್ರಮಗಳ ಪೂರ್ಣ ಮಾಹಿತಿ ನೀಡಿದರು.

ಸಮಾರಂಭದ ಅಧ್ಯಕ್ಷತೆ ವಹಿಸಿದ್ದ ಗ್ರಾಮ ಪಂಚಾಯತಿ ಅಧ್ಯಕ್ಷರಾದ ಗೀತಾಗಣೇಶ್ ಅವರು ಮಾತನಾಡಿ ಸಮಾಜ ನೆಮ್ಮದಿಯಾಗಿರಬೇಕಾದರೆ ಇಂತಹ ಕಾರ್ಯಕ್ರಮಗಳು ಅತಿ ಅಗತ್ಯ ಅಂತಹ ಅಗತ್ಯಗಳನ್ನು ಪೂರೈಸುವಂತಹ ಸಂಸ್ಥೆಯಾಗಿ ಶ್ರೀಕ್ಷೇತ್ರ ಧರ್ಮಸ್ಥಳ ಗ್ರಾಮಾಭಿವೃದ್ಧಿ ಸಂಸ್ಥೆ ನಿರ್ವಹಿಸುತ್ತಿರುವುದು ನಮ್ಮ ಹೆಮ್ಮೆಯಾಗಿದೆ ಎಂದರು.

ತಾಲೂಕು ಯೋಜನಾಧಿಕಾರಿಗಳಾದ ಹಾಲಪ್ಪ ಎಂ.ಎ. ಹಾಗೂ ಗ್ರಾಮ ಪಂಚಾಯತ್ ಸದಸ್ಯರಾದ ಮಾಯಣ್ಣ,ನಾಗವೇಣಿ,ಹಂಪಮ್ಮ, ಊರಿನ ಗಣ್ಯರಾದ ಅಂಬಣ್ಣ ಹಾಗೂ ದೇವಸ್ಥಾನ ಸಮಿತಿಯ ಅಧ್ಯಕ್ಷರಾದ ಶ್ರೀ ಮಲ್ಲಿಕಾರ್ಜುನ ಸ್ವಾಮಿ ತಾಲೂಕಿನ ಕೃಷಿ ಮೇಲ್ವಿಚಾರಕರಾದ ಸಂಜೀವ್, ಹಾಗೂ ಜ್ಞಾನವಿಕಾಸ ಸಮನ್ವಯ ಅಧಿಕಾರಿ ರೇಖಾ, ಕೃಷಿ ಮೇಲ್ವಿಚಾರಕರಾದ ರಾಜು , ವಲಯದ ಎಲ್ಲಾ ಸೇವಾ ಪ್ರತಿನಿಧಿಗಳು ಮತ್ತು ವಿ.ಎಲ್.ಇ ಗಳು ಉಪಸ್ಥಿತರಿದ್ದರು.

# ಜಿಲ್ಲಾ ಕಾರಾಗೃಹದಲ್ಲಿ ಆರೋಗ್ಯ ತಪಾಸಣೆ ಶಿಬಿರ



ಕೊಪ್ಪಳ, ಮಾರ್ಚ್ 12 : ಜಿಲ್ಲಾ ಕಾರಾಗೃಹ ಕೊಪ್ಪಳದಲ್ಲಿ ವಿಶ್ವ ಮಾನವ ಹಕ್ಕುಗಳ ಆಯೋಗದ ವತಿಯಿಂದ ಜಿಲ್ಲಾ ಕಾನೂನು ಸೇವೆಗಳ ಪ್ರಾಧಿಕಾರ, ಜಿಲ್ಲಾ ಕಾರಾಗೃಹ ಹಾಗೂ ಶ್ರೀ ಅಮರೇಶ್ವರ ಕ್ಲಿನಿಕ್ ಕೊಪ್ಪಳ, ಸಹಯೋಗದಲ್ಲಿ ಮಾರ್ಚ್ 10 ರಂದು ಜಿಲ್ಲಾ ಕಾರಾಗೃಹದಲ್ಲಿ ಕಾರಾಗೃಹದಲ್ಲಿನ ಬಂಧಿಗಳಿಗೆ ಆರೋಗ್ಯ ತಪಾಸಣೆ ಶಿಬಿರವನ್ನು ಆಂಯೋಜಿಸಲಾಗಿತ್ತು.

ಕಾರ್ಯಕ್ರಮದಲ್ಲಿ ಕಾರಾಗೃಹ ಅಧೀಕ್ಷಕರಾದ ವಿಜಯಕುಮಾರ ಡಿ ಚವ್ಹಾಣ ಹಾಗೂ ಕಾರಾಗೃಹದ ಸಿಬ್ಬಂದಿಗಳು, ಡಿ.ಎಲ್.ಎಸ್.ಎ ವಕೀಲರಾದ ಬೆಳ್ಳಿಯಪ್ಪ, ಮಂಜುನಾಥ ಬಿ, ಮಹಾಲಕ್ಷ್ಮೀ, ವೈದ್ಯರಾದ ಲಿಂಗರಾಜ ಹಾಗೂ ಸಿಬ್ಬಂದಿ ವರ್ಗದವರು ಉಪಸ್ಥಿತರಿದ್ದರು.

# ಯಲಬುರ್ಗಾ ಪ.ಪಂ: ಆಕ್ಷೇಪಣೆ ಆಹ್ವಾನ

ಕೊಪ್ಪಳ, ಮಾರ್ಚ್ 12 : ಯಲಬುರ್ಗಾ ಪಟ್ಟಣ ಪಂಚಾಯತ ವ್ಯಾಪ್ತಿಯ ಯಲಬುರ್ಗಾ ಸ್ಥಳೀಯ ಯೋಜನಾ ಪ್ರಾಧಿಕಾರದ ವತಿಯಿಂದ ಯಲಬುರ್ಗಾ ಪಟ್ಟಣದ ಸ್ಥಳಿಯ ಯೋಜನಾ ಪ್ರದೇಶಕ್ಕೆ ಮಹಾಯೋಜನೆ ರೂಪಿಸುವ ಸಂಬಂಧವಾಗಿ ಸಾರ್ವಜನಕರಿಂದ ಆಕ್ಷೇಪಣೆಗಳನ್ನು ಆಹ್ವಾನಸಲಾಗಿದೆ. ಯಲಬುರ್ಗಾ ಸ್ಥಳೀಯ ಯೋಜನಾ ಪ್ರಾಧಿಕಾರವು ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಯಮ 1961 ರ ಕಲಂ (5) ಮತ್ತು (10) ರನ್ವಯ ಕ್ರಮ ಜರುಗಿಸಿ, ಯಲಬುರ್ಗಾ ಪಟ್ಟಣದ ಸ್ಥಳೀಯ ಯೋಜನಾ ಪ್ರದೇಶಕ್ಕೆ ಮಹಾಯೋಜನಾ (ತಾತ್ಕಾಲಿಕ) ಅನ್ನು ರೂಪಿಸಿ ನಕ್ಷೆ ಮತ್ತು ವರದಿಗಳೊಂದಿಗೆ ಸರ್ಕಾರದ ಅನುಮೋದನೆಗೆ ಸಲ್ಲಿಸಲಾಗಿತ್ತು.

ಸರ್ಕಾರದ ಆದೇಶ ಸಂಖ್ಯೆ. ನಅಇ 215 ಗುಅಪ್ರಾ 2020 ಬೆಂಗಳೂರು ದಿನಾಂಕ 28–03–2023 ರಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಅಧಿನಯಮ 1961 ರ ಕಲಂ 13(1) ರನ್ವಯ ತಾತ್ಕಾಲಿಕ ಅನುಮೋದನೆಯನ್ನು ನೀಡಲಾಗಿದೆ. ಅದರಂತೆ ಕರ್ನಾಟಕ ನಗರ ಮತ್ತು ಗ್ರಾಮಾಂತರ ಯೋಜನಾ ಕಾಯ್ದೆ 1961 ರ ಕಲಂ 13(2) ರಂತೆ ಸಾರ್ವಜನಕರಿಂದ ಆಕ್ಷೇಪಣೆಗಳನ್ನು ಅಹ್ವಾನಸಿದೆ.ನಕ್ಷೆ ಮತ್ತು ವರದಿಯನ್ನು ಯಲಬುರ್ಗಾ ಪಟ್ಟಣ ಪಂಚಾಯತ ಕಛೇರಿಯಲ್ಲಿ ಸಾರ್ವಜನಕರ ವೀಕ್ಷಣೆಗಾಗಿ ಇಡಲಾಗಿದ್ದು, ಸಾರ್ವಜನಕರು ತಮ್ಮ ಆಕ್ಷೇಪಣೆಗಳು ಅಥವಾ ಸಲಹೆ, ಸೂಚನೆಗಳು ಇದ್ದಲ್ಲಿ ಈ ಅಧಿಸೂಚನೆ ಪ್ರಕಟಣೆಗೊಂಡ ದಿನಾಂಕದಿಂದ 60 ದಿನದೊಳಗಾಗಿ ಖುದ್ದಾಗಿ ಅಥವಾ ನೋಂದಣಿ ಅಂಚೆಯ ಮೂಲಕ ಮುಖ್ಯಾಧಿಕಾರಿಗಳು, ಪಟ್ಟಣ ಪಂಚಾಯತ್ ಕಾರ್ಯಲಯ ಯಲಬುರ್ಗಾ ಇವರಿಗೆ ಆಕ್ಷೇಪಣೆಗಳನ್ನು ಸಲ್ಲಿಸಬೇಕು. 60 ದಿನಗಳ ನಂತರ ಯಾವುದೇ ಆಕ್ಷೇಪಣೆಗಳು, ಸಲಹೆ, ಸೂಚನೆಗಳು ಬಂದಲ್ಲಿ ಅವುಗಳನ್ನು ಸ್ವೀಕರಿಸಲಾಗುವುದಿಲ್ಲವೆಂದು ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

ಸ್ವೀಕರಿಸಲಾಗುವುದಿಲ್ಲವೆಂದು ಪಟ್ಟಣ ಪಂಚಾಯತ ಮುಖ್ಯಾಧಿಕಾರಿಗಳು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ರಾಜ್ಯಾದ್ಯಂತ ಪಂಚ ಗ್ಯಾರಂಟಿಗಳ ಸಮರ್ಪಕ ಅನುಷ್ಠಾನ: ಸಚಿವ ಸತೀಶ ಜಾರಕಿಹೊಳಿ

(1 ನೇ ಪುಟದಿಂದ)

ಶಾಲಾ ದುರಸ್ತಿಗಳು, ಮುರಾರ್ಜಿ, ಕಿತ್ತೂರು ರಾಣಿ ಚನ್ನಮ್ಮ ವಸತಿ ಶಾಲೆ ಲೋಕಾರ್ಪಣೆ, ಕೆರೆ ತುಂಬಿಸುವ, ಬ್ಯಾರೇಜ್, ಏತ ನೀರಾವರಿ ಸೇರಿದಂತೆ ಸಾಕಷ್ಟು ಯೋಜನೆ ಗಳನ್ನು ಜಾರಿಗೆ ತರಲಾಗಿದೆ. ಯಮಕನಮರಡಿ ಮತಕ್ಷೇತ್ರದಲ್ಲಿ ಉತ್ತಮ ರಸ್ತೆಗಳನ್ನು ನಿರ್ಮಾಣ ಮಾಡಲಾಗಿದೆ. ಅದರಂತೆ ಜಿಲ್ಲೆಯಲ್ಲಿ 100 ಸರ್ಕಾರಿ ಶಾಲೆಗಳನ್ನು ನೀಡಲಾಗಿದೆ.

ನಗರದಲ್ಲಿ 50 ಕೋಟಿ ವೆಚ್ಚದಲ್ಲಿ ಹೊಸ ಜಿಲ್ಲಾ ಕ್ರೀಡಾಂಗಣ ನಿರ್ಮಾಣ ಮಾಡಲಾಗುವುದು. ರಸ್ತೆ, ನೀರಾವರಿ ಯೋಜನೆ ಸೇರಿದಂತೆ ಮುಂಬರುವ ದಿನಗಳಲ್ಲಿ ಇನ್ನಷ್ಟು ವಿವಿಧ ಅಭಿವೃದ್ಧಿ ಕಾಮ ಗಾರಿಗಳನ್ನು ಕೈಗೆತ್ತಿಕೊ ಳ್ಳಲಾಗುವುದು. ಸರ್ಕಾರದ ಪಂಚ ಗ್ಯಾರಂಟಿ ಯೋಜನೆಗಳನ್ನು ಸದ್ಬಳಕೆ ಮಾಡಿಕೊಂಡು ಆರ್ಥಿಕ ಸಬಲೀಕರಣ ಹೊಂದಬೇಕು. ಮಕ್ಕಳ ಶಿಕ್ಷಣಕ್ಕೆ ಹೆಚ್ಚು ಒತ್ತು ನೀಡಬೇಕು. ಸರ್ಕಾರದ ಯೋಜನೆಗಳ ಪ್ರಯೋಜನಗಳನ್ನು ಪಡೆದುಕೊಂಡು ಪ್ರತಿಯೊಬ್ಬರೂ ಸಮಾಜದ ಮುಖ್ಯ ವಾಹಿನಗೆ ಬರಬೇಕು ಎಂದು ಸಚಿವ ಸತೀಶ ಜಾರಕಿಹೊಳಿ ಅವರು ತಿಳಿಸಿದರು. ಬೆಳಗಾವಿ ಉತ್ತರ ವಿಧಾನ ಸಭಾ ಮತ ಕ್ಷೇತ್ರದ ಶಾಸಕ ಆಸೀಫ್ (ರಾಜು) ಸೇಠ್, ಜಿಲ್ಲಾಧಿಕಾರಿ ನಿತೇಶ್ ಪಾಟೀಲ, ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಕಾಧಿಕಾರಿ ರಾಹುಲ್ ಶಿಂಧೆ, ಡಿಸಿಪಿ ರೋಹನ್ ಜಗದೀಶ್, ಬೆಳಗಾವಿ ಉಪ ವಿಭಾಗಾಧಿಕಾರಿ ಬಸವಣ್ಣೆಪ್ಪ ಕಲಶೆಟ್ಟಿ, ಬೆಳಗಾವಿ ತಹಶೀಲ್ದಾರ ಸಿದ್ದರಾಯ ಭೋಸಗಿ, ಆರ್ಸಿಯು ಕುಲಪತಿ ಪ್ರೊ.ತ್ಯಾಗರಾಜ, ರಿಜಿಸ್ಟರ್ ರಾಜಶ್ರೀ ಜೈನಾಪುರ, ಆಹಾರ ಇಲಾಖೆ ಜಂಟಿ ನಿರ್ದೇಶಕ ಶ್ರೀಶೈಲ ಕಂಕಣವಾಡಿ, ವಿವಿಧ ಗ್ರಾಮ ಪಂಚಾಯತಿ ಅಧ್ಯಕ್ಷರು, ಉಪಾಧ್ಯಕ್ಷರು ಉಪಸ್ಥಿತರಿದ್ದರು. ವಿವಿಧ ಗ್ರಾಮಗಳಿಂದ ಆಗಮಿಸಿದ ಸಾವಿರಾರು ಜನ ಮಹಿಳೆಯರು ಕಾರ್ಯಕ್ರಮದಲ್ಲಿ ಭಾಗವಹಿಸಿದ್ದರು.

## ಶ್ರೀ ಕೆ.ಎಚ್.ಪಾಟೀಲ ಐ.ಟಿ.ಐ ಕಾಲೇಜ ಎಂದು ನಾಮಕರಣ ಮಾಡಿದ ಸಚಿವ ಎಚ್.ಕೆ.ಪಾಟೀಲ

(1 ನೇ ಪುಟದಿಂದ)

ಐಟಿಐ ಕಾಲೇಜು 1990–91 ರಲ್ಲಿ ವಿಶ್ವ ಬ್ಯಾಂಕ್ ಯೋಜನೆ ಅಡಿಯಲ್ಲಿ ಮಂಜೂರಾಗಿತ್ತು. ಸ್ವಂತ ಕಟ್ಟಡ ಇಲ್ಲದ್ದರಿಂದ ಕೆ.ಎಚ್.ಪಾಟೀಲ ಅವರು ಬೆಟಗೇರಿಯಲ್ಲಿನ ಹುಲಕೋಟಿ ಸಹಕಾರಿ ಶಿಕ್ಷಣ ಸಮಸ್ಥೆಯ ವಸತಿ ನಿಲಯದಲ್ಲಿನ ತಾತ್ಕಾಲಿಕ ತರಬೇತಿ ನೀಡಲು ಅನುಕೂಲ ಮಾಡಿಕೊಟ್ಟಿದ್ದರು ಎಂದು ನೆನೆದರು. ಸ್ವಂತ ಕಟ್ಟಡ ಕಟ್ಟಲು ಜಮೀನು ಸಿಗದಿರುವ ಸಂದರ್ಭದಲ್ಲಿ ಹುಲಕೋಟಿ ಸಹಕಾರಿ ಶಿಕ್ಷಣ ಸಂಸ್ಥೆಯ ವತಿಯಿಂದ ಬೆಟಗೇರಿಯಲ್ಲಿನ 1.22 ಎಕರೆ ಜಮೀನನ್ನು ದಾನವಾಗಿ ನೀಡಿ ಸಂಸ್ಥೆಯು ಬೇರಡೆ ಸ್ಥಳಾಂತರವಾಗುವುದನ್ನು ತಪ್ಪಿಸಿ ಬೆಟಗೇರಿಯಲ್ಲಿಯೇ ಉಳಿಯುವಂತೆಯೇ ಮಾಡುವ ಮೂಲಕ ಸಾವಿರಾರು ಬಡಮಕ್ಕಳ ಶಿಕ್ಷಣಕ್ಕೆ ಕೆ.ಎಚ್.ಪಾಟೀಲರು ಕಾರಣಕರ್ತರಾಗಿದ್ರು ಎಂದು ಸಚಿವ ಎಚ್.ಕೆ.ಪಾಟೀಲ ಅವರು ಹೇಳಿದರು. ಕರ್ನಾಟಕ ವಿಧಾನ ಪರಿಷತ್ ಸಭಾಪತಿ ಬಸವರಾಜ ಹೊರಟ್ಟಿ ಮಾತನಾಡಿ ದೂರದೃಷ್ಟಿಯ ಹರಿಕಾರ, ಕೆ.ಎಚ್.ಪಾಟೀಲ ಅವರು ಅನೇಕ ಶಿಕ್ಷಣ ಸಂಸ್ಥೆಗಳನ್ನು ಮುನ್ನಡೆಸಿದ್ದಾರೆ. ಬಡ ಮಕ್ಕಳ ಶಿಕ್ಷಣಕ್ಕಾಗಿ ಹಗಲಿರುಳು ಶ್ರಮಿಸಿದ್ದಾರೆ ಎಂದರು. ಈ ಐಟಿಐ ಕಾಲೇಜಿನಲ್ಲಿ ಈ ಬಾಗದ ಬಡಮಕ್ಕಳು ಉತ್ತಮ ಶಿಕ್ಷಣ ಪಡೆಯುವ ಮೂಲಕ ರಾಜ್ಯದ, ದೇಶದ ವಿವಿಧ ರಂಗಗಳಲ್ಲಿ ಉತ್ತಮ ಹುದ್ದೆಯಲ್ಲಿ ಕಾರ್ಯನಿರ್ವಹಿಸುವಂತಾಗಲಿ ಹಾಗೂ ಇತರರಿಗೆ ಉದ್ಯೋಗದಾತರಾಗಲಿ ಎಂದು ಶುಭ ಹಾರೈಸಿದರು.

ಕಾರ್ಯಕ್ರಮದಲ್ಲಿ ಮಾಜಿ ಶಾಸಕ ಡಿ.ಆರ್.ಪಾಟೀಲ, ಜಿಲ್ಲಾಧಿಕಾರಿ ವೈಶಾಲಿ ಎಂ.ಎಲ್, ಕೈಗಾರಿಕಾ ತರಬೇತಿ ಮತ್ತು ಉದ್ಯೋಗ ಇಲಾಖೆಯ ಜಂಟಿ ನಿರ್ದೇಶಕ ಡಾ. ಬಸವಪ್ರಭು ಹಿರೇಮಠ, ಕೆ.ಎಚ್..ಪಾಟೀಲ ಐಟಿಐ ಸಂಸ್ಥೆಯ ಪ್ರಾಚಾರ್ಯ ಡಾ. ಮಲ್ಲೂರ ಬಸವರಾಜ ಸೇರಿದಂತೆ ಇತರರು ಇದ್ದರು.

## ಗ್ಯಾರಂಟಿ ಯೋಜನೆಯ ಮೂಲಕ ರಾಜ್ಯದಲ್ಲಿ ಬದಲಾವಣೆ ಪರ್ವ

(1 ನೇ ಪುಟದಿಂದ)

ವಹಿಸಿ ಮಾತನಾಡಿ ಸರ್ಕಾರ ಈಗಾಗಲೇ ಚುನಾವಣೆಯಲ್ಲಿ ತಮ್ಮೆಲ್ಲರಿಗೂ ನೀಡಿದ ನೀಡಿದ ಬರವಸೆಗಳನ್ನು ಈಡೇರಿಸಿ, ತಮ್ಮ ವಿಶ್ವಾಸವನ್ನು ಮುಖ್ಯಮಂತ್ರಿ ಸಿದ್ದರಾಮಯ್ಯ ಹಾಗೂ ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ನೇತೃತ್ವದ ಸರ್ಕಾರ ಉಳಿಸಿಕೊಂಡಿದೆ. ಇಂದು ಗ್ಯಾರಂಟಿ ಸಮಾವೇಶ ಮೂಲಕ ಯೋಜನೆಗಳು ತಲುಪಿದ ಬಗ್ಗೆ ಖಚಿತ ಮಾಡಿಕೊಂಡು, ಅರ್ಹರಿಗೆ ಯೋಜನೆ ತಲುಪಿಸಲು ಸಮಾವೇಶ ಮಾಡಲಾಗುತ್ತಿದೆ ಎಂದರು. ಗ್ಯಾರಂಟಿ ಯೋಜನೆಗಳ ಲಾಭ 99 ರಷ್ಟು ಜನರಿಗೂ ತಲುಪಲು ಕಾರಣೀಕರ್ತರಾದ ಸಚಿವರಾದ ಎಚ್. ಕೆ. ಪಾಟೀಲ ಹಾಗೂ ಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್ ಅವರಿಗೆ ಅಭಿನಂದನೆಗಳು ಎಂದರು.ಎಂದರು.ಗ್ಯಾರಂಟಿ ಯೋಜನೆಗಳು ನಿರಂತರವಾಗಿ ನಡೆಯಲಿವೆ. ಇದರಲ್ಲಿ ಯಾವುದೇ ಅನುಮಾನ ಬೇಡ ಎಂದರು. ಇನ್ನು ಹೆಚ್ಚಿನ ಬಡವರ ಸೇವೆ ಮಾಡಲು ನಿರಂತರವಾಗಿ ನಮ್ಮ ಆಶೀರ್ವಾದ ಸಿದ್ದರಾಮಯ್ಯ ನೇತೃತ್ವದ ಸರ್ಕಾರಕ್ಕೆ ನೀಡಬೇಕು ಎಂದು ಕೋರಿದರುಜಿಲ್ಲಾಧಿಕಾರಿ ವೈಶಾಲಿ ಎಂ. ಎಲ್ ಅವರು ಮಾತನಾಡಿ ಸರ್ಕಾರದ ಯೋಜನೆಗಳ ಲಾಭ ಅರ್ಹರಿಗೆ ತಲುಪಿಸಿದ್ದೇವೆ. ಯೋಜನೆಗಳಿಂದ ನಮ್ಮ ಕುಟುಂಬದ ಅಭಿವೃದ್ಧಿಗೆ ಬಳಕೆ ಮಾಡಿಕೊಳ್ಳಿ ಎಂದು ತಿಳಿಸಿದರು. ಮಹಿಳೆಯರಿಗಾಗಿ ಪ್ರಮುಖವಾಗಿ ಗ್ಯಾರಂಟಿ ಯೋಜನೆಗಳನ್ನು ಸರ್ಕಾರ ಜಾರಿಮಾಡಿದೆ. ಶಕ್ತಿ ಯೋಜನೆಯಲ್ಲಿ 3.78 ಕೋಟಿ ಮಹಿಳೆಯರು ಜಿಲ್ಲೆಯಲ್ಲಿ ಪ್ರಯಾಣ ಮಾಡಿದ್ದಾರೆ. ಅನ್ನಭಾಗ್ಯ ಯೋಜನೆ, ಗೃಹ ಲಕ್ಷ್ಮೀ, ಗೃಹಜ್ಯೋತಿ, ಯುವನಿಧಿ ಉತ್ತಮ ಆರ್ಥಿಕ ಅಭಿವೃದ್ಧಿ ಹೊಂದಲು ಸಹಕಾರಿಯಾಗಿವೆ . ಮಕ್ಕಳ ಶಿಕ್ಷಣ ಮತ್ತು ಆರೋಗ್ಯಕ್ಕೆ ಹೆಚ್ಚಿನ ಆದ್ಯತೆ ಕೊಡಬೇಕೆಂದು ತಿಳಿಸಿದರು.ಕಾರ್ಯಕ್ರಮದಲ್ಲಿ ಮಾಜಿ ಜಿ.ಪಂ. ಅಧ್ಯಕ್ಷೆ ಸುಜಾತ ದೊಡ್ಡಮನಿ, ತಹಶೀಲ್ದಾರ ಧನಂಜಯ ಮಾಲಗಿತ್ತಿ , ಉಪವಿಭಾಗಾಧಿಕಾರಿ ವೆಂಕಟೇಶ ನಾಯ್ಕ, ವಿವಿಧ ಇಲಾಖೆ ಅಧಿಕಾರಿ, ಗ್ರಾ.ಪಂ. ಅಧ್ಯಕ್ಷ, ಉಪಾಧ್ಯಕ್ಷರು, ಸಿಬ್ಬಂದಿಗಳು, ಫಲಾನುಭವಿಗಳು ಹಾಜರಿದ್ದರು.

## ಪ್ರಧಾನಿಮಂತ್ರಿಗಳಾದ ನರೇಂದ್ರ ಮೋದಿ ಅವರಿಂದ "ಒಂದು ನಿಲ್ದಾಣ, ಒಂದು ಉತ್ಪನ್ನ" ಮಳಿಗೆಗೆ ಚಾಲನೆ

(1 ನೇ ಪುಟದಿಂದ)

ಬಳಿಕ ಮಾತನಾಡಿದ ಅವರು, ಕೇಂದ್ರ ಸರ್ಕಾರದ ರೈಲ್ವೆ ಸಚಿವಾಲಯವು ಸ್ಥಳೀಯ ಉತ್ಪನ್ನಗಳಿಗೆ ಉತ್ತೇಜನ ನೀಡುವ ದೃಷ್ಟಿಕೋನವನ್ನು ಹೊಂದಿದೆ. ಉತ್ಪನ್ನಗಳ ಮಾರಾಟ ಮಾಡಲು ಮಳಿಗೆ ಒದಗಿಸುವ ನಿಟ್ಟಿನಲ್ಲಿ 'ಒಂದು ನಿಲ್ದಾಣ ಒಂದು ಉತ್ಪನ್ನ' ಮಳಿಗೆಯನ್ನು ಬಳ್ಳಾರಿ ನಿಲ್ದಾಣದಲ್ಲಿ ನೂತನವಾಗಿ ಆರಂಭಿಸಲಾಗಿದ್ದು, ಹೆಮ್ಮೆಯ ಸಂಗತಿಯಾಗಿದೆ ಎಂದು ಹೇಳಿದರು.

ಹುಬ್ಬಳ್ಳಿ ವಲಯ ರೈಲ್ವೇ ಬಳಕೆದಾರರ ಸಲಹಾ ಸಮಿತಿಯ ಸದಸ್ಯ ರವಿ ಕುಮಾರ್ ಮಾತನಾಡಿ, ಸ್ಥಳೀಯ ಮಾರುಕಟ್ಟೆಯ ಉತ್ಪನ್ನಗಳಿಗೆ ಉತ್ತೇಜನ ನೀಡುವ ಯೋಜನೆ 'ಒಂದು ನಿಲ್ದಾಣ ಒಂದು ಉತ್ಪನ್ನ' ಆಗಿದ್ದು, ಸ್ಥಳೀಯ ಕುಶಲ ಕರ್ಮಿಗಳಿಗೆ ಉಪಯುಕ್ತವಾಗಲಿದೆ ಎಂದರು. ಬಳ್ಳಾರಿ ರೈಲ್ವೆ ನಿಲ್ದಾಣದಲ್ಲಿ 'ಒಂದು ನಿಲ್ದಾಣ, ಒಂದು ಉತ್ಪನ್ನ' ಯೋಜನೆಯಡಿ ಸಂಡೂರು ಕರ ಕುಶಲ ಕೇಂದ್ರದ ಲಂಬಾಣಿ ಕಸೂತಿ ಕಲೆಯ ಉತ್ಪನ್ನಗಳ ಮಾರಾಟ ಮಳಿಗೆ ಆರಂಭಿಸಲಾಯಿತು.

ಈ ಸಂದರ್ಭದಲ್ಲಿ ಮಹಾನಗರ ಪಾಲಿಕೆಯ ಉಪ ಮೇಯರ್ ಬಿ.ಜಾನಕಿ, ಹಿರಿಯ ವಿಭಾಗೀಯ ಮೆಕ್ಯಾನಿಕಲ್ ಇಂಜಿನಿಯರ್ ಆಂಜನೇಯಲು, ವಿಭಾಗೀಯ ವೈದ್ಯಕೀಯ ಅಧಿಕಾರಿ ಸುಶ್ಮಿತಾ ಜಗನ್ ಮೋಹನ್ ರೆಡ್ಡಿ, ಚೇಂಬರ್ ಆಫ್ ಕಾಮರ್ಸನ ಅಧ್ಯಕ್ಷರಾದ ಮಹಾರುದ್ರ ಗೌಡ, ಚೇಂಬರ್ ಆಫ್ ಕಾಮರ್ಸನ ಸದಸ್ಯ ರಾಮಚಂದ್ರಯ್ಯ, ಬಳ್ಳಾರಿ ರೈಲ್ವೆ ನಿಲ್ದಾಣದ ವ್ಯವಸ್ಥಾಪಕ ನಾಗೇಶ್ ಬಾಬು ಶರ್ಮಾ, ಮುಖ್ಯ ವಾಣಿಜ್ಯ ನಿರೀಕ್ಷಕ ಎಸ್. ಹೊನ್ನೂರಸ್ವಾಮಿ ಸೇರಿದಂತೆ, ಮಹಾನಗರ ಪಾಲಿಕೆಯ ಸದಸ್ಯರು, ರೈಲ್ವೆ ಇಲಾಖೆಯ ಅಧಿಕಾರಿಗಳು, ಸಿಬ್ಬಂದಿ ವರ್ಗದವರು, ಹಾಗೂ ಸಾರ್ವಜನಿಕರು ಉಪಸ್ಥಿತರಿದ್ದರು.

GADI KANNADIGA,kannada daily, printed, published , edited, & woned by murugesh b.shivapuji ,printed ,plot no:12,sy no:174/3b,press colony,kuvempu nagar, post:hindalaga-591108,Tq & Dt:belgaum, And published at plot no:12,sy no:174/3b,press colony,kuvempu nagar,post:hindalaga-591108,Tq & Dt:belgaum, karnataka, RNI NO:KAR KAN/2003/10452. Permission to post at Belagavi, Kacheri post office Belagavi. No:PMG/KA/NK/BM/743/24-26